ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಗಳು) :

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಅಂತಹ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದೆ ಇಲ್ಲ.

ದಿ ಕ್ಲಬ್‌ನವರು ನಿಯಮಗಳನ್ನು ಪಾಲಿಸದೇ ಕಟ್ಟಡ ಕಟ್ಟುತ್ತಿರುವುದು

3252 - ಶ್ರೀ ಸಿ.ಎಂ. ಲಿಂಗಪ್ಪ (ರಾಮನಗರ) : ಸನ್ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಚಂದ್ರಾ ಲೇಔಟ್ ವಾರ್ಡ್‌ಗೆ ಸೇರಿದ ಮೈಸೂರು ರಸ್ತೆಯಲ್ಲಿರುವ ದಿ ಕ್ಲಬ್ ನವರು ನಿಯಮಗಳನ್ನು ಪಾಲಿಸದೇ ಕಟ್ಟಡ ನಿರ್ಮಿಸುತ್ತಿದ್ದುದರ ಬಗ್ಗೆ ಕ್ರಮ ಕೈಗೊಳ್ಳಲಾಗುವುದೆಂದು ಹಿಂದಿನ ಅಧಿವೇಶನದಲ್ಲಿ ಸರ್ಕಾರ ಉತ್ತರಿಸಿದ್ದುದು ನಿಜವಲ್ಲವೇ?*

ಆ) *ನಿಯಮಗಳನ್ನು ಮೀರಿಯೂ ದಿ ಕ್ಲಬ್‌ನ ಮಾಲೀಕ ತನ್ನ ಹಿಂದಿನ ನಿರ್ಮಾಣ ಕಾರ್ಯಗಳನ್ನು ಮುಂದುವರೆಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಇ) *ನಿಯಮಗಳನ್ನು ಉಲ್ಲಂಘಿಸಿ ನಿರ್ಮಾಣ ಮಾಡಿರುವ ಕಟ್ಟಡಗಳ ಬಗ್ಗೆ ಸರ್ಕಾರ ಯಾವ ಕಟ್ಟುನಿಟ್ಟಿನ ಕ್ರಮವನ್ನು ಕೈಗೊಳ್ಳಲಿದೆ?*

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಗಳು) :

ಅ) ಹೌದು.

ಆ) ಈ ವಿಷಯದ ಬಗ್ಗೆ ನಗರ ಸಿವಿಲ್ ನ್ಯಾಯಾಲಯದಲ್ಲಿ ದಾವೆ ಇದ್ದು, ಸದರಿ ಸ್ವತ್ತಿನ ಬಗ್ಗೆ ತಡೆಯಾಜ್ಞೆಯನ್ನು ನೀಡಿರುತ್ತಾರೆ. ದಾವೆಯನ್ನು ದಿನಾಂಕ 5.12.2000ರಂದು ವಿಚಾರಣೆಗಾಗಿ ಮುಂದೂಡಲಾಗಿರುತ್ತದೆ.

ಇ) ನ್ಯಾಯಾಲಯದ ತಡೆಯಾಜ್ಞೆಯನ್ನು ತೆರವುಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ತದನಂತರ, ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು.

ಮುಜರಾಯಿ ಇಲಾಖೆಯಿಂದ ಬೀರೂರು ಕ್ಷೇತ್ರಕ್ಕೆ ಹಣ

3254 - ಶ್ರೀ ಕೆ.ಬಿ. ಮಲ್ಲಿಕಾರ್ಜುನ (ಬೀರೂರು) : ಮಾನ್ಯ ಮುಜರಾಯಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *1999-2000 ಮತ್ತು 2000-01ನೇ ಸಾಲಿನಲ್ಲಿ ಕರ್ನಾಟಕ ರಾಜ್ಯದಲ್ಲಿ ದೇವಸ್ಥಾನಗಳ*